Akashvani: Bangalore
National Bulletin In Kannada
10.09.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
10.09.2026: 13.10hrs
**********

ಮುಖ್ಯಾಂಶಗಳು :

1. ಶ್ರೀಲಂಕಾ ಪ್ರಧಾನಿ ಅವರೊಂದಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ದ್ವಿಪಕ್ಷೀಯ ಮಾತುಕತೆ
2. ನವದೆಹಲಿಯಲ್ಲಿ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಯಲ್ಲಿ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಭಾಗಿ
3. ವಿಶ್ವ ಆರೋಗ್ಯ ಸಂಸ್ಥೆಯ ಮಹಾ ನಿರ್ದೇಶಕರೊಂದಿಗೆ ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಮಾತುಕತೆ
4. ಜೂನಿಯರ್ ಹಾಕಿ ಏಷ್ಯಾ ಕಪ್ ; ಮಹಿಳಾ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿಂದು ಭಾರತ-ಪಾಕಿಸ್ತಾನ ಮುಖಾಮುಖಿ

*********

ರಕ್ಷಣ ಸಚಿವ ರಾಜನಾಥ್ ಸಿಂಗ್ ಅವರು, ಕೊಲಂಬೊದಲ್ಲಿ ಶ್ರೀಲಂಕಾ ಪ್ರಧಾನಿ ಡಾ.ಹರಿಣಿ ಅಮರಸೂರ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಭಾರತ ಮತ್ತು ಶ್ರೀಲಂಕಾ ನಡುವೆ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಮೂಲಸೌಕರ್ಯ, ನಾವೀನ್ಯತೆ ಮತ್ತು ಸಂಶೋಧನೆ ಸೇರಿದಂತೆ ಪರಸ್ಪರ ಆಸಕ್ತಿಯ ಕ್ಷೇತ್ರಗಳಲ್ಲಿನ ಪ್ರಗತಿಯನ್ನು ಉಭಯ ನಾಯಕರು ಪರಿಶೀಲಿಸಿದರು. ಈ ವೇಳೆ ಮಾತನಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಈ ಪ್ರದೇಶದಲ್ಲಿ ಭಾರತ ಮತ್ತು ಶ್ರೀಲಂಕಾ ಶಾಂತಿ ಮತ್ತು ಸಮೃದ್ಧಿ ಹಾಗೂ ಜನರ ಕಲ್ಯಾಣಕ್ಕಾಗಿ ಸಾಮಾನ್ಯ ಅಭಿವೃದ್ಧಿ ದೃಷ್ಟಿಕೋನದತ್ತ ಕೆಲಸ ಮಾಡುವುದನ್ನು ಮುಂದುವರಿಸಬೇಕು. ಸಾಮರ್ಥ್ಯವೃದ್ಧಿಯು ದ್ವಿಪಕ್ಷೀಯ ಸಹಕಾರದ ಪ್ರಮುಖ ಆಧಾರಸ್ತಂಭವಾಗಿದೆ ಎಂದು ಹೇಳಿದರು. ಆಡಳಿತ ಮತ್ತು ನಾಯಕತ್ವದಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಗುರಿ ಹೊಂದಿರುವ ಭಾರತೀಯ ಸಾಂಸ್ಕೃತಿಕ ಸಂಬಂಧಗಳ ಮಂಡಳಿ ಮತ್ತು ಭಾರತ ಸರ್ಕಾರದ ಇತರ ಉಪಕ್ರಮಗಳಿಂದ ವಿದ್ಯಾರ್ಥಿ ವೇತನ ಪಡೆಯಲು ಶ್ರೀಲಂಕಾದ ಹೆಚ್ಚಿನ ಮಹಿಳೆಯರನ್ನು ಪ್ರೋತ್ಸಾಹಿಸಲು ಭಾರತ ಬಯಸುತ್ತದೆ ಎಂದು ಅವರು ತಿಳಿಸಿದರು.

*********

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಇಂದು ಕೊಲಂಬೊದಲ್ಲಿ ಶ್ರೀಲಂಕಾದ ಮಾಜಿ ಕ್ರಿಕೆಟಿಗರಾದ ಅರವಿಂದ ಡಿಸಿಲ್ವಾ, ಸನತ್ ಜಯಸೂರ್ಯ ಮತ್ತು ಚಾಮಿಂಡಾ ವಾಸ್ ಅವರನ್ನು ಭೇಟಿಯಾದರು. ಸಾಮಾಜಿಕ ಜಾಲತಾಣದಲ್ಲಿ ಸಚಿವ ರಾಜನಾಥ್ ಸಿಂಗ್, ಈ ಕ್ರಿಕೆಟಿಗರು ತಮ್ಮ ಅಸಾಧಾರಣ ಪ್ರದರ್ಶನಕ್ಕಾಗಿ ಭಾರತದಲ್ಲಿ ಲಕ್ಷಾಂತರ ಜನರಿಂದ ಮೆಚ್ಚುಗೆ ಪಡೆದಿದ್ದಾರೆ ಎಂದು ಹೇಳಿದ್ದಾರೆ. ರಕ್ಷಣಾ ಸಚಿವರು ಎರಡು ದಿನಗಳ ಭೇಟಿಗಾಗಿ ಶ್ರೀಲಂಕಾದಲ್ಲಿದ್ದಾರೆ.

*********

ನವದೆಹಲಿಯಲ್ಲಿ ಇದೇ ಭಾನುವಾರ ನಡೆಯಲಿರುವ ಬ್ರಿಕ್ಸ್ ಶೃಂಗಸಭೆ ಉದ್ದೇಶಿಸಿ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಮಾತನಾಡಲಿದ್ದಾರೆ. ಈ ಕುರಿತು ಮಾಹಿತಿ ನೀಡಿದ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿಗಳ ವಕ್ತಾರ ಸ್ಟೀಫನ್ ಡುಜಾರಿಕ್, ಜಾಗತಿಕವಾಗಿ ಬದಲಾಗುತ್ತಿರುವ ವಾಸ್ತವವನ್ನು ಪ್ರತಿಬಿಂಬಿಸುವಲ್ಲಿ ಬ್ರಿಕ್ಸ್ ಪಾತ್ರದ ಮಹತ್ವವನ್ನು ಆಂಟೋನಿಯೊ ಗುಟೆರಸ್ ತಮ್ಮ ಭಾಷಣದಲ್ಲಿ ಉಲ್ಲೇಖಿಸುವ ನಿರೀಕ್ಷೆಯಿದೆ ಎಂದು ತಿಳಿಸಿದ್ದಾರೆ. ಶೃಂಗಸಭೆಯ ನೇಪಥ್ಯದಲ್ಲಿ ಆಂಟೋನಿಯೊ ಗುಟೆರಸ್ ಅವರು, ಪ್ರಧಾನಿ ನರೇಂದ್ರ ಮೋದಿ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಚೀನಾ ಅಧ್ಯಕ್ಷ ಕ್ಸಿ ಜಿನ್

ಪಿಂಗ್ ಸೇರಿದಂತೆ ಇತರ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸುವ ಸಾಧ್ಯತೆಯಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಇದೇ ಶನಿವಾರ ಮತ್ತು ಭಾನುವಾರದಂದು ಬ್ರಿಕ್ಸ್ ಶೃಂಗಸಭೆ ನಡೆಯಲಿದೆ. 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ' ಎಂಬುದು ಈ ವರ್ಷದ ಬ್ರಿಕ್ಸ್ ಶೃಂಗಸಭೆಯ ಘೋಷವಾಕ್ಯವಾಗಿದೆ.

*********

ಟಿಮೋರ್-ಲೆಸ್ಟೆಯಲ್ಲಿ ನಡೆದ ವಿಶ್ವ ಆರೋಗ್ಯ ಸಂಸ್ಥೆಯ ಆಗ್ನೇಯ ಏಷ್ಯಾದ ಪ್ರಾದೇಶಿಕ ಸಮಿತಿಯ ೭೮ನೇ ಅಧಿವೇಶನದ ಸಂದರ್ಭದಲ್ಲಿ ವಿಶ್ವ ಆರೋಗ್ಯ ಸಂಸ್ಥೆಯ ಮಹಾನಿರ್ದೇಶಕ ಡಾ. ಟೆಡ್ರೊಸ್ ಅಧಾನೊಮ್ ಘೆಬ್ರೆಯೆಸಸ್ ಅವರು ಕೇಂದ್ರ ಆರೋಗ್ಯ ಸಚಿವ ಜಗತ್ ಪ್ರಕಾಶ್ ನಡ್ಡಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಆರೋಗ್ಯ ಕ್ಷೇತ್ರದಲ್ಲಿ ವಿಶೇಷವಾಗಿ ತಾಯಂದಿರು ಮತ್ತು ಮಕ್ಕಳ ಆರೋಗ್ಯ ಮತ್ತು ಸಾಂಕ್ರಾಮಿಕವಲ್ಲದ ರೋಗಗಳ ವಿರುದ್ಧದ ಹೋರಾಟಕ್ಕಾಗಿ ಡಾ. ಟೆಡ್ರೊಸ್, ಭಾರತವನ್ನು ಶ್ಲಾಘಿಸಿದ್ದಾರೆ. ಒಂದು ಲಕ್ಷ ಅರವತ್ತು ಸಾವಿರ ಆಯುಷ್ಮಾನ್ ಆರೋಗ್ಯ ಕೇಂದ್ರಗಳ ಮೂಲಕ, ಸಮುದಾಯಗಳಿಗೆ ಅಧಿಕ ರಕ್ತದೊತ್ತಡ, ಮಧುಮೇಹ ಮತ್ತು ಸಾಮಾನ್ಯ ಕ್ಯಾನ್ಸರ್‌ಗಳಿಗೆ ತಪಾಸಣೆ ಮತ್ತು ಚಿಕಿತ್ಸೆಯನ್ನು ಭಾರತ ಸುಲಭಗೊಳಿಸಿದೆ ಎಂದು ಅವರು ಹೇಳಿದ್ದಾರೆ.

*********

ತಮಿಳುನಾಡಿನ ಮಧುರಾಂತಕಂ ಮತ್ತು ಧಾರಾಪುರಂ ಮೀಸಲು ವಿಧಾನಸಭಾ ಕ್ಷೇತ್ರಗಳಿಗೆ ಅಕ್ಟೋಬರ್ ೬ ರಂದು ಉಪಚುನಾವಣೆ ನಡೆಯಲಿದೆ ಎಂದು ಭಾರತೀಯ ಚುನಾವಣಾ ಆಯೋಗ ತಿಳಿಸಿದೆ. ನಾಮಪತ್ರ ಸಲ್ಲಿಕೆಗೆ ಇದೇ ೧೬ರಂದು ಕೊನೆಯ ದಿನವಾಗಿದೆ. ನಾಮಪತ್ರ ಹಿಂಪಡೆಯಲು ಇದೇ ೧೯ ರಂದು ಅಂತಿಮ ದಿನವಾಗಿದೆ. ಈಗಾಗಲೇ ಬಿಎಂಕೆ ಈ ಎರಡೂ ಕ್ಷೇತ್ರಗಳಿಗೆ ತಮ್ಮ ಅಭ್ಯರ್ಥಿಗಳನ್ನು ಘೋಷಿಸಿದೆ. ಇಂದು ಟಿವಿಕೆ ಪಕ್ಷ ಕೂಡ ತನ್ನ ಅಭ್ಯರ್ಥಿಗಳನ್ನು ಘೋಷಿಸಿದೆ. ವಿಧಾನಸಭಾ ಚುನಾವಣೆ ನಂತರ ಮೈತ್ರಿ ಬದಲಾಗಿರುವುದರಿಂದ ಈ ಚುನಾವಣೆ ಮಹತ್ವ ಪಡೆದಿದೆ. ಈ ಹಿಂದೆ ಡಿಎಂಕೆ ಮೈತ್ರಿಕೂಟದಲ್ಲಿದ್ದ ಕಾಂಗ್ರೆಸ್, ವಿಸಿಕೆ, ಐಯುಎಂಎಲ್ ಮತ್ತು ಎಂಡಿಎಂಕೆ ಪಕ್ಷಗಳು ಈಗ ಟಿವಿಕೆ ನೇತೃತ್ವದ ಜಾತ್ಯಾತೀತ ಸಾಮಾಜಿಕ ನ್ಯಾಯ ವಿಜಯ ಮೈತ್ರಿಕೂಟದಲ್ಲಿವೆ.

*********

ಇಂದು ಪರಮವೀರ ಚಕ್ರ ಪ್ರಶಸ್ತಿ ಪುರಸ್ಕೃತ ಕಂಪನಿ ಕ್ವಾರ್ಟರ್ ಮಾಸ್ಟರ್ ಹವಿಲ್ದಾರ್ ಅಬ್ದುಲ್ ಹಮೀದ್ ಅವರ ಹುತಾತ್ಮ ದಿನ. ಈ ಹಿನ್ನೆಲೆಯಲ್ಲಿ ಅವರಿಗೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಗೌರವ ನಮನ ಸಲ್ಲಿಸಿದ್ದಾರೆ. ೧೯೬೫ರ ಭಾರತ-ಪಾಕಿಸ್ತಾನ ಯುದ್ಧದ ಸಮಯದಲ್ಲಿ ಅಬ್ದುಲ್ ಹಮೀದ್ ಅವರು, ಅದಮ್ಯ ಧೈರ್ಯ ಮತ್ತು ಅಸಧಾರಣ ಯುದ್ಧ ಕೌಶಲ್ಯಗಳನ್ನು ಪ್ರದರ್ಶಿಸಿದರು. ರಾಷ್ಟ್ರಕ್ಕಾಗಿ ಸರ್ವೋಚ್ಚ ತ್ಯಾಗ ಮಾಡಿದರು ಎಂದು ಸಾಮಾಜಿಕ ಜಾಲತಾಣದಲ್ಲಿ ಓಂ ಬಿರ್ಲಾ ಹೇಳಿದ್ದಾರೆ. ತಮ್ಮ ಅಸಾಧಾರಣ ಧೈರ್ಯದಿಂದ ಅಬ್ದುಲ್ ಹಮೀದ್ ಅವರು, ಅನೇಕ ಶತ್ರು ಟ್ಯಾಂಕ್‌ಗಳನ್ನು ನಾಡಪಡಿಸಿದರು. ಪ್ರತಿಕೂಲ ಪರಿಸ್ಥಿತಿಗಳ ಹೊರತಾಗಿಯೂ ಯುದ್ಧದಲ್ಲಿ ಮುಂಚೂಣಿಯಲ್ಲಿ ನಿಂತರು. ಯುದ್ಧ ಭೂಮಿಯಲ್ಲಿ ತಮ್ಮ ಪ್ರಾಣ ಸಮರ್ಪಣೆಯ ಮೂಲಕ ಭಾರತೀಯ ಸೇನೆಯ ವೈಭವಯುತ ಪರಂಪರೆಯನ್ನು ಮತ್ತಷ್ಟು ಶ್ರೀಮಂತಗೊಳಿಸಿದರು. ರಾಷ್ಟ್ರ ಅವರ ಶೌರ್ಯ ಮತ್ತು ತ್ಯಾಗವನ್ನು ಸದಾ ಸ್ಮರಿಸುತ್ತದೆ ಎಂದು ತಿಳಿಸಿದ್ದಾರೆ.

*********

ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ನವದೆಹಲಿಯಲ್ಲಿ ನಡೆಯಲಿರುವ ಮೂರು ದಿನಗಳ ಜಾಗತಿಕ ಒಣಭೂಮಿ ಕೃಷಿ ಸಮಾವೇಶ ೨೦೨೬ ಉದ್ದೇಶಿಸಿ ಮಾತನಾಡಲಿದ್ದಾರೆ. ಭಾರತೀಯ ಕೃಷಿ ಸಂಶೋಧನಾ

ಮಂಡಳಿ ಮತ್ತು ಅರೆ-ಶುಷ್ಕ ಉಷ್ಣವಲಯಗಳ ಅಂತಾರಾಷ್ಟ್ರೀಯ ಬೆಳೆಗಳ ಸಂಶೋಧನಾ ಸಂಸ್ಥೆ ಜಂಟಿಯಾಗಿ ಆಯೋಜಿಸಿರುವ ಈ ಸಮಾವೇಶ 'ದಕ್ಷಿಣ ರಾಷ್ಟ್ರಗಳ ಸಹಕಾರದೊಂದಿಗೆ ಒಣಭೂಮಿ ಕೃಷಿಯ ಪರಿವರ್ತನೆ' ಎಂಬ ವಿಷಯವನ್ನು ಆಧರಿಸಿದೆ. ಏಷ್ಯಾ, ಆಫ್ರಿಕಾ ಮತ್ತು ಅಮೆರಿಕ ಖಂಡಗಳ ೮೦೦ಕ್ಕೂ ಹೆಚ್ಚು ವಿಜ್ಞಾನಿಗಳು, ನೀತಿ ನಿರೂಪಕರು, ರೈತ ಪ್ರತಿನಿಧಿಗಳು ಹಾಗೂ ಅಭಿವೃದ್ಧಿ ಪಾಲುದಾರರು ಆರು ಪ್ರಮುಖ ವಿಷಯಗಳ ಕುರಿತು ಚರ್ಚಿಸಲಿದ್ದಾರೆ. ಸಮಾವೇಶದ ಅಂತ್ಯದಲ್ಲಿ ಒಣಭೂಮಿ ಕೃಷಿಗೆ ಸಂಬಂಧಿಸಿದ ದೆಹಲಿ ಘೋಷಣೆ ಅಂಗೀಕರಿಸಲಾಗುವುದು. ಅಲ್ಲದೇ ಹೊಸ ಸಹಭಾಗಿತ್ವಗಳು, ತಿಳಿವಳಿಕೆ ಒಪ್ಪಂದಗಳು ಹಾಗೂ ಒಣಭೂಮಿ ಕೃಷಿ ವಿಜ್ಞಾನಕ್ಕೆ ಗಣನೀಯ ಕೊಡುಗೆ ನೀಡಿದವರನ್ನು ಗುರುತಿಸಿ ಪ್ರಶಸ್ತಿ ಘೋಷಿಸಲಾಗುವುದು ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ತಿಳಿಸಿದೆ.

*********

ಜಪಾನ್ ವಾಯು ಸ್ವ-ರಕ್ಷಣಾ ಪಡೆಯ ಯುದ್ಧ ವಿಮಾನಗಳು ಭಾರತಕ್ಕೆ ಚೊಚ್ಚಲ ಬಾರಿಗೆ ಭೇಟಿ ನೀಡುತ್ತಿರುವುದು ಭಾರತ-ಜಪಾನ್ ರಕ್ಷಣಾ ಪಾಲುದಾರಿಕೆಯಲ್ಲಿ ಮಹತ್ವದ ಮೈಲಿಗಲ್ಲು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಸಚಿವರು, ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಗೆ ಎರಡೂ ರಾಷ್ಟ್ರಗಳ ಬೆಳೆಯುತ್ತಿರುವ ನಂಬಿಕೆ ಮತ್ತು ಹಂಚಿಕೆಯ ಬದ್ಧತೆಯನ್ನು ಇದು ಪ್ರತಿಬಿಂಬಿಸುತ್ತದೆ. 'ವೀರ್ ಗಾರ್ಡಿಯನ್' ನಂತಹ ಸಮರಾಭ್ಯಾಸವು ಉಭಯ ದೇಶಗಳ ನಡುವಿನ ಸಂಬಂಧವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಹೇಳಿದ್ದಾರೆ.

*********

ಜವಾಹರ್ ನವೋದಯ ವಿದ್ಯಾಲಯಗಳ ೨೭ನೇ ರಾಷ್ಟ್ರೀಯ ಯುವ ಸಂಸತ್ ಸ್ಪರ್ಧೆ ೨೦೨೫-೨೬ರ ಬಹುಮಾನ ವಿತರಣೆ ಸಮಾರಂಭ ಇಂದು ನವದೆಹಲಿಯ ಸಂಸತ್ ಭವನ ಸಂಕೀರ್ಣದಲ್ಲಿ ನಡೆಯಲಿದೆ. ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದು, ಸ್ಪರ್ಧೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿಜೇತ ವಿದ್ಯಾರ್ಥಿಗಳು ಹಾಗೂ ವಿದ್ಯಾಲಯಗಳಿಗೆ ಬಹುಮಾನ ವಿತರಿಸಲಿದ್ದಾರೆ. ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವಾಲಯ, ಕಳೆದ ೩೦ ವರ್ಷಗಳಿಂದ ಜವಾಹರ್ ನವೋದಯ ವಿದ್ಯಾಲಯಗಳಲ್ಲಿ ಯುವ ಸಂಸತ್ ಸ್ಪರ್ಧೆಗಳನ್ನು ಆಯೋಜಿಸುತ್ತಿದೆ.

*********

ಚೀನಾದ ಮೊಕಿಯಲ್ಲಿ ಇಂದು ನಡೆಯಲಿರುವ ಜೂನಿಯರ್ ಹಾಕಿ ಏಷ್ಯಾ ಕಪ್‌ನ ಮಹಿಳಾ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಭಾರತ, ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡವನ್ನು ಎದುರಿಸಲಿದೆ. ಚೀನಾ ತಂಡದ ವಿರುದ್ಧ ಗೋಲುರಹಿತ ಡ್ರಾ ಸಾಧಿಸಿದ್ದ ಭಾರತ, ಮಹಿಳಾ ಜೂನಿಯರ್ ತಂಡ, ಕ್ವಾರ್ಟರ್ ಫೈನಲ್ ಪ್ರವೇಶಿಸಿತು. ಇದೇ ವೇಳೆ, ಪುರುಷರ ವಿಭಾಗದ ಕ್ವಾಟರ್ ಪೈನಲ್ ಪಂದ್ಯದಲ್ಲಿ ಭಾರತ ತಂಡ, ಚೈನೀಸ್ ತೈಪೆ ತಂಡವನ್ನು ೧೫-೦ ಅಂತರದಿಂದ ಸೋಲಿಸಿ, ಸೆಮಿಫೈನಲ್ ಪ್ರವೇಶಿಸಿದೆ. ಅಲ್ಲದೇ ಗುಂಪು 'ಎ' ವಿಭಾಗದಲ್ಲಿ ಭಾರತ ಪುರುಷರ ಜೂನಿಯರ್ ತಂಡ ಅಗ್ರ ಸ್ಥಾನ ಪಡೆದಿದೆ.

*****END****